**Government of Karnataka**
**Deposition Sheet (R.P.N.57) Form 4 Criminal**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೇವದುರ್ಗ**

| | |
|---|---|
| ಕ್ರಿಮಿನಲ್ ಪ್ರಕರಣ ಸಂಖ್ಯೆ | 3074/2017 |

ದಿನಾಂಕ 21-07-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಚಾಸಾಃ 2 ಪ್ರಾಸಾಃ 1

| | |
|---|---|
| ಹೆಸರು | ಶಶಿಧರ |
| ತಂದೆಯ ಹೆಸರು | ಹನುಮಂತ |
| ವಯಸ್ಸು | 30 ವರ್ಷ |
| ಉದ್ಯೋಗ | ಗಾರೆ ಕೆಲಸ |
| ವಾಸಸ್ಥಳ | ಜಾಗೀರಜಾಡಲದಿನ್ನಿ |

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ಆರೋಪಿತರು ನಮ್ಮೂರಿನವರು ನನಗೆ ಪರಚಿಯ ಇರುತ್ತಾರೆ. ಚಾಸಾ-1, 3 ರಿಂದ 7 ರವರು ನನಗೆ ಪರಿಚಯ ಇರುತ್ತಾರೆ. ಸಾಕ್ಷಿ ಪಂಚನಾಮೆಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ ಪಿ 1 ಎಂದು ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿ:ಪಿ-1(ಎ) ಎಂದು ಗುರುತಿಸಲಾಯಿತು. ನಿ:ಪಿ-1 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ಪೊಲಿಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮತ್ತು ಜಪ್ತಿ ಪಂಚನಾಮೆ ಮಾಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಪ್ರಾರ್ಥಿಸುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಸ.ಸ.ಅ. ರವರಿಂದ:**

ದಿ: 21-06-2016 ರಂದು ಬೆಳಿಗ್ಗೆ 10-30 ರಿಂದ 11-30 ಗಂಟೆಯವರೆಗೆ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿ:ಪಿ-1 ರಂತೆ ಗುನ್ನ ಸ್ಥಳದ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಸ್ಥಳ ಮತ್ತು ಜಪ್ತಿ ಪಂಚನಾಮೆ ಮಾಡಿದ್ದರು ಸಹಿತ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಪಾಟೀ ಸವಾಲು ಇಲ್ಲ ಎಂದು ಹೇಳುತ್ತಾರೆ.

**ಮರು ವಿಚಾರಣೆ: ಇಲ್ಲ;**

(ಸಾಕ್ಷಿಯು ನೀಡಿದ ಸಾಕ್ಷ್ಯವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿಕೊಳ್ಳಲಾಯಿತು.)

**ಓ.ಹೇ.ಕೇ.ಸರಿ ಇದೆ.**

ಸಹಿ/-

ಸಿವಿಲ್ ಜಡ್ಜ್ & ಜೆ.ಎಂ.ಎಫ್.ಸಿ.

ದೇವದುರ್ಗ